<u>**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.**</u>

<u>**ಸಿ.ಸಿ. ನಂ.1007/2019**</u>

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | : | ಸುಶೀಲಾಬಾಯಿ | ಸಿ.ಡಬ್ಲ್ಯೂ-6 |
| ತಂದೆ/ ಗಂಡನ ಹೆಸರು | : | ರಂಗಾನಾಯ್ಕ | ಪಿ.ಡಬ್ಲ್ಯೂ-4 |
| ವಯಸ್ಸು | : | 45 ವರ್ಷ | |
| ಉದ್ಯೋಗ | : | ಕೂಲಿಕೆಲಸ | |
| ವಾಸಸ್ಥಳ | : | ರಾಂಜಿಹಟ್ಟಿ | ದಿಃ22-11-2025. |

<u>**ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದಃ**</u>

ನ್ಯಾಯಾಲಯದ ಮುಂದಿರುವ ಆರೋಪಿತರು ನನಗೆ ಗೊತ್ತು. ಈಗ್ಗೆ 4-5 ವರ್ಷಗಳ ಹಿಂದೆ ನಮ್ಮ ಹೋಲದಲ್ಲಿ ಬೇಸಾಯ ಮಾಡುತ್ತಿದ್ದಾಗ ನಾನ್ಯಾನಾಯ್ಕ ಬಂದು ನನ್ನ ಗಂಡನಾದ ಚಾಸಾ-1 ರವರ ಮೇಲೆ ಬಂದು ನಿಂದು ಏನು ಇದೆ ಎಂದು ಬೇಸಾಯ ಮಾಡುತ್ತಿಯಾ ಅಂತ ಗಲಾಟೆ ಮಾಡಿರುತ್ತಾನೆ. ಆ ಸಮಯದಲ್ಲಿ ನಾನು ಮನೆಯಲ್ಲಿದ್ದು, ನಂತರ ಸ್ಥಳಕ್ಕೆ ಹೋಗಿರುತ್ತೇನೆ. 2 ಮತ್ತು 3 ನೇ ಆರೋಪಿತರು ಬಂದು ಕಲ್ಲಿನಿಂದ ಚಾಸಾ-1 ರವರಿಗೆ ಹೊಡೆದಿರುತ್ತಾರೆ ಹಾಗೂ ಚಾಸಾ-1 ರವರಿಂದ ಎತ್ತಿ ಕುಕ್ಕಿದ್ದರಿಂದ ಚಾಸಾ-1 ರವರ ಭುಜದ ಮೂಳೆ ಮುರಿದಿರುತ್ತದೆ ಹಾಗೂ ಸೊಂಟಕ್ಕೆ ಪೆಟ್ಟಾಗಿರುತ್ತದೆ. ನಂತರ ನಾನು ಚಾಸಾ-1 ರವರನ್ನು ಆಟೋದಲ್ಲಿ ಚಳ್ಳಕೆರೆ ಆಸ್ಪತ್ರೆಗೆ ದಾಖಲಿಸಿರುತ್ತೇನೆ. ಗಲಾಟೆ ಸಮಯದಲ್ಲಿ ನಾನು ಒಬ್ಬಳೇ ಹಾಜರಿದ್ದು, ನಂತರ ಎಲ್ಲರು ಬಂದಿರುತ್ತಾರೆ. ನಂತರ ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದಿರುತ್ತೇವೆ. ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ.

**( ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿಯನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)**

<u>**ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದಃ**</u>

ವೀರದಿಮ್ಮನಹಳ್ಳಿ ಗ್ರಾಮದ ಸರ್ವೇ ನಂ.42 ರ ಜಮೀನು ನನ್ನ ತವರು ಮನೆಯಿಂದ ನನಗೆ ಬಂದಿರುತ್ತದೆ ಎಂದರೆ ಸರಿ. ಸದರಿ ಜಮೀನು ರಾಂಜಿಹಟ್ಟಿ ಗ್ರಾಮಕ್ಕೆ ಹೊಂದಿಕೊಂಡಿರುತ್ತದೆ ಎಂದರೆ ಸರಿ. ಸದರಿ ಜಮೀನಿನಲ್ಲಿ ನಾವು ಮನೆ ಕಟ್ಟಿಕೊಂಡು ವಾಸ ಇರುತ್ತೇವೆ ಎಂದರೆ ಸರಿ. ದಿಃ26-06-2017 ರಂದು ಬೆಳಿಗ್ಗೆ 8-00 ಗಂಟೆ ಸಮಯದಲ್ಲಿ ನಾನು ಮನೆಯಲ್ಲಿದ್ದು, ನನ್ನ ಗಂಡ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದರು ಎಂದರೆ ಸರಿ. ಆ ಸಮಯದಲ್ಲಿ ಚಾಸಾ-2 ಮತ್ತು 4 ರವರು

ಬಂದಿದ್ದರು ಎಂದರೆ ಸಾಕ್ಷಿಯು ಗಲಾಟೆಯಾದ ನಂತರ ಬಂದಿರುತ್ತಾರೆ ಎಂದು ನುಡಿಯುತ್ತಾರೆ. 1 ರಿಂದ 3 ನೇ ಆರೋಪಿತರು ಚಾಸಾ-1 ರವರೊಂದಿಗೆ ಜಗಳ ತೆಗೆದಿರುತ್ತಾರೆ ಎಂದರೆ ಸರಿ. ಆಗ ಚಾಸಾ-2 ಮತ್ತು 4 ರವರು ಜಗಳ ನಡೆದ ಸ್ಥಳಕ್ಕೆ ಹೋಗಿರುತ್ತಾರೆ ಎಂದರೆ ಸರಿ. ಆ ಸಮಯದಲ್ಲಿ ನಾನು ಅವರೊಂದಿಗೆ ಸ್ಥಳಕ್ಕೆ ಹೋಗಿರುತ್ತೇನೆ ಎಂದರೆ ಸರಿ. ಆರೋಪಿತರು ನಮ್ಮ ಜಮೀನಿಗೆ ಅಕ್ರಮ ಪ್ರವೇಶ ಮಾಡಿ ಯಾರೋ ನೀನು ಇಲ್ಲಿ ಬಂದು ಜಮೀನಿನಲ್ಲಿ ಕೆಲಸ ಮಾಡಲು ಎಂದು ಸೂಳೆಮಗನೇ ಎಂದು ಹೇಗೆ ಕೆಲಸ ಮಾಡುತ್ತೀಯಾ ಎಂದು ಆರೋಪಿತರು ಕೈಕಾಲುಗಳಿಂದ ಚಾಸಾ-1 ರವರಿಗೆ ಮೈಕೈಗೆ ಹಾಗೂ ಎಡಗಣ್ಣಿನ ಪಕ್ಕ ಹೊಡೆದು ಒಳಪೆಟ್ಟು ಮಾಡಿರುತ್ತಾರೆ ಎಂದರೆ ಸರಿ. 2 ನೇ ಆರೋಪಿಯು ನನಗೆ ಬೈದು ಮತ್ತು ಚಾಸಾ-1 ರವರನ್ನು ನೇಲಕ್ಕೆ ಕುಕ್ಕಿರುತ್ತಾರೆ ಎಂದರೆ ಸರಿ. ಚಾಸಾ-2 ಮತ್ತು 4 ರವರು ಗಲಾಟೆ ಬಿಡಿಸಿರುತ್ತಾರೆ ಎಂದರೆ ಸರಿ. ನನ್ನ ಗಂಡನ ಎಡಭುಜಕ್ಕೆ ಒಳಪೆಟ್ಟು ಬಿದ್ದು ಊತ ಕಂಡು ಬಂದಿರುತ್ತದೆ ಎಂದರೆ ಸರಿ. ಆರೋಪಿತರು ಚಾಸಾ-1 ರವರಿಗೆ ಹೋಗುವಾಗ ಇನ್ನೊಮ್ಮೆ ಸಿಕ್ಕರೆ ನಿನ್ನನ್ನು ಬಿಡುವುದಿಲ್ಲ ಎಂದು ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿ. ಸದರಿ ವಿಚಾರವನ್ನು ಚಾಸಾ-7 ರವರಿಗೆ ದೂರವಾಣಿ ಕರೆ ಮುಖಾಂತರ ತಿಳಿಸಿರುತ್ತೇನೆ ಎಂದರೆ ಸರಿ.

**ಪಾಟೀ ಸವಾಲುಃ ಶ್ರೀ ಬಿ ಪಿ., ಆರೋಪಿತರ ಪರ ವಕೀಲರಿಂದಃ**

ಈ ದಿನ ನ್ಯಾಯಾಲಯಕ್ಕೆ ನನ್ನ ಗಂಡ ಕರೆದುಕೊಂಡು ಬಂದಿರುತ್ತಾರೆ ಎಂದರೆ ಸರಿ. ಚಾಸಾ-1 ರವರು ಹೇಳಿಕೊಟ್ಟ ರೀತಿ ನಾನು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಘಟನೆಯನ್ನು ಖುದ್ದಾಗಿ ನೋಡಿಲ್ಲ ಎಂದರೆ ಸರಿಯಲ್ಲ. ನಾನು ಘಟನೆಯನ್ನು ಖುದ್ದಾಗಿ ನೋಡಿರುವ ಬಗ್ಗೆ ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ. 3 ನೇ ಆರೋಪಿಯು ನನ್ನ ಗಂಡನ ಎದೆಗೆ ಹೊಡೆದಿರುತ್ತಾರೆ ಎಂದು ನಾನು ಹೇಳಿಕೆ ನೀಡಿರುತ್ತೇನೆ. ಚಾಸಾ-1 ರವರಿಗೆ ಸೊಂಟಕ್ಕೆ ಪೆಟ್ಟುಗಳು ಆಗಿರುತ್ತವೆ ಎಂದು ಹೇಳಿಕೆ ನೀಡಿರುತ್ತೇನೆ. ಸರ್ವೇ ನಂ.42 ರ ಪಶ್ಚಿಮ ದಿಕ್ಕಿನಲ್ಲಿ ಆರೋಪಿತರ ಜಮೀನು ಇರುತ್ತದೆ ಎಂದರೆ ಸರಿ. ನಮ್ಮ ಹಾಗೂ ಆರೋಪಿತರ ಜಮೀನಿನ ಮಧ್ಯದಲ್ಲಿ ಓಡಾಡಲು ರಸ್ತೆ ಇರುತ್ತದೆ ಎಂದರೆ ಸರಿ. ಆರೋಪಿತರು ಸದರಿ ರಸ್ತೆಯಲ್ಲಿ ಓಡಾಡಲು ನನ್ನ ಗಂಡ ಅಡ್ಡಿಪಡಿಸುತ್ತಿದ್ದ ಎಂದರೆ ಸರಿಯಲ್ಲ.

ದಾರಿಯ ವಿಚಾರವಾಗಿ ಊರಿನಲ್ಲಿ ಪಂಚಾಯಿತಿ ಮಾಡಿಸಿ ಚಾಸಾ-1 ರವರಿಗೆ ಬುದ್ದಿವಾದ ಹೇಳಿಸಿದರು ಎಂದರೆ ಸರಿಯಲ್ಲ. ಚಾಸಾ-1 ರವರು ಪಂಚಾಯಿತಿಯವರ ಮಾತು ಕೇಳದ ಕಾರಣ ತಹಶಿಲ್ದಾರವರಿಗೆ ಅರ್ಜಿಯನ್ನು ಕೊಟ್ಟಿದ್ದರು ಎಂದರೆ ಸರಿಯಲ್ಲ. ಆರೋಪಿತರ ವಿರುದ್ಧ ದೂರನ್ನು ದಾಖಲಿಸಿದರೆ ರಸ್ತೆಯಲ್ಲಿ ಓಡಾಡುವುದಿಲ್ಲ ಅಂತ ದೂರನ್ನು ದಾಖಲಿಸಿರುತ್ತಾರೆ ಎಂದರೆ ಸರಿಯಲ್ಲ.

ಆರೋಪಿತರು ಚಾಸಾ-1 ರವರನ್ನು ನೇಲಕ್ಕೆ ಕುಕ್ಕಿದರು ಎಂದು ಹೇಳುವುದು ಸುಳ್ಳು ಎಂದರೆ ಸರಿಯಲ್ಲ. ಆರೋಪಿತರು ಹಲ್ಲೆ ಮಾಡಿದ್ದರಿಂದ ಚಾಸಾ-1 ರವರ ಎಡಗಣ್ಣಿನ ಹತ್ತಿರ ಪೆಟ್ಟುಗಳು ಆಗಿರುವುದು ಎಂದು ಹೇಳುವುದು ಸುಳ್ಳು ಎಂದರೆ ಸರಿಯಲ್ಲ. ನನ್ನ ಗಂಡನ ಭುಜ ಮುರಿದಿತ್ತು ಅಂತ ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿ. ಚಾಸಾ-2 ಮತ್ತು 4 ರವರು ಜಗಳ ಬಿಡಿಸಿರುತ್ತಾರೆ ಎಂದು ಹೇಳುವುದು ಸುಳ್ಳು ಎಂದರೆ ಸರಿಯಲ್ಲ. ನಾನು ನನ್ನ ಗಂಡನ ಜೊತೆಗೆ ಬೇಸಾಯ ಮಾಡುತ್ತಿದ್ದೆ ಅಂತ ಹೇಳಿಕೆ ನೀಡಿರುತ್ತೇನೆ. ನಾನು ಆ ರೀತಿ ಹೇಳಿಕೆ ಕೊಡದೆ ಇದ್ದರೂ ಸಹ ನನ್ನ ಗಂಡನ ಮಾತುಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರು ಕಲ್ಲಿನಿಂದ ಚಾಸಾ-1 ರವರ ಎದೆಗೆ ಹೊಡೆದಿರುತ್ತಾರೆ ಎಂದು ಹೇಳುವುದು ಸುಳ್ಳು ಎಂದರೆ ಸರಿಯಲ್ಲ. ನನ್ನ ಗಂಡನ ಎಡಭುಜಕ್ಕೆ ಊತ ಬಂದಿತ್ತು ಎಂದು ಹೇಳುವುದು ಸುಳ್ಳು ಎಂದರೆ ಸರಿಯಲ್ಲ. ಆರೋಪಿತರು ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದು ಹೇಳುವುದು ಸುಳ್ಳು ಎಂದರೆ ಸರಿಯಲ್ಲ.

ಘಟನೆಯಾದ 8-9 ಗಂಟೆಗಳ ನಂತರ ಆಸ್ಪತ್ರೆಗೆ ಹೋಗಿರುತ್ತೇನೆ. ರಾಂಜಿಹಟ್ಟಿಯಿಂದ ಚಳ್ಳಕೆರೆಗೆ ಸಾಕಷ್ಟು ಆಟೋಗಳು ಇರುತ್ತವೆ ಎಂದರೆ ಸರಿ. ನಾನು ಮತ್ತು ಚಾಸಾ-2, 4 ರವರು ಚಾಸಾ-1 ರವರು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇವೆ ಎಂದು ಹೇಳುವುದು ಸುಳ್ಳು ಎಂದರೆ ಸರಿಯಲ್ಲ. ಚಾಸಾ-1 ರವರನ್ನು ಚಳ್ಳಕೆರೆ ಆಸ್ಪತ್ರೆಗೆ ಬೆಳಿಗ್ಗೆ ಕರೆದುಕೊಂಡು ಹೋಗಿದ್ದು, ನಂತರ ನನ್ನ ಮಗ ಚಾಸಾ-7 ರವರು ಸಂಜೆ ವೇಳೆಗೆ ಚಿತ್ರದುರ್ಗಕ್ಕೆ ಕರೆದುಕೊಂಡು ಹೋಗಿರುತ್ತಾನೆ. ಚಿತ್ರದುರ್ಗ ಆಸ್ಪತ್ರೆಯಲ್ಲಿ ಒಂದು ವಾರಗಳ ಕಾಲ ದಾಖಲಾಗಿದ್ದೇವು. ಚಿತ್ರದುರ್ಗ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ದಾಖಲೆಗಳನ್ನು ಪೊಲೀಸರಿಗೆ ನೀಡಿರುತ್ತೇವೆ. ಆರೋಪಿತರಿಗೆ ದಾರಿ ಬಿಟ್ಟು ಕೊಡಬೇಕಾಗುತ್ತದೆ ಎಂಬ ಕಾರಣದಿಂದ ಚಾಸಾ-1 ರವರು ದಾಖಲಿಸಿದ ಸುಳ್ಳು ದೂರಿಗೆ ಅನುಗುಣವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರು ನನಗಾಗಲೀ ಮತ್ತು ನನ್ನ ಗಂಡನಿಗಾಲೀ ಹಲ್ಲೆ ಮಾಡಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ